## ಕರ್ನಾಟಕ ವಿಧಾನ ಪರಿಷತ್ತು

| | | | |
|---|---|---|---|
| 1 | ಮಾನ್ಯ ವಿಧಾನ ಪರಿಷತ್ತಿನ ಸದಸ್ಯರ ಹೆಸರು | : | ಶ್ರೀ ಬಸನಗೌಡ ಬಾದರ್ಲಿ (ವಿಧಾನಸಭೆಯಿಂದ ಚುನಾಯಿತರು) |
| 2 | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: | : | 1566 |
| 3 | ಉತ್ತರಿಸುವ ದಿನಾಂಕ | : | 19.12.2025 |
| 4 | ಉತ್ತರಿಸುವ ಸಚಿವರು | : | ಕಾರ್ಮಿಕ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ವಿವಿಧ ಖಾಸಗಿ /ಸರ್ಕಾರಿ ಉದ್ಯಮ ಹಾಗೂ ಇನ್ನಿತರ ಉತ್ಪಾದನಾ ಘಟಕಗಳಲ್ಲಿ ಕರ್ತವ್ಯ ನಿರ್ವಹಿಸುವ ಕಾರ್ಮಿಕರಿಗೆ ಕನಿಷ್ಠ ಮೂಲ ವೇತನ ಕಾಯ್ದೆಯನ್ನು ಜಾರಿ ಮಾಡಲಾಗಿದೆಯೇ; | ಹೌದು. ಖಾಸಗಿ ಹಾಗೂ ಸರ್ಕಾರಿ ಉದ್ದಿಮೆಗಳನ್ನು ಒಳಗೊಂಡಂತೆ ಒಟ್ಟು 81 ಅನುಸೂಚಿತ ಉದ್ದಿಮೆಗಳಿಗೆ ಸರ್ಕಾರವು ಕನಿಷ್ಠ ವೇತನ ದರಗಳನ್ನು ನಿಗಧಿಪಡಿಸಿದ್ದು ನಿಯಮಾನುಸಾರ ಕಾಲ ಕಾಲಕ್ಕೆ ಪರಿಷ್ಕರಣೆ ಮಾಡಲಾಗುತ್ತಿದೆ.<br><br>ಅನುಸೂಚಿತ ಉದ್ದಿಮೆಗಳಿಗೆ ಒಳಪಡದ ಉದ್ದಿಮೆಗಳ ಕಾರ್ಮಿಕರಿಗೂ ಕನಿಷ್ಠ ವೇತನ ಖಾತ್ರಿಪಡಿಸುವ ಉದ್ದೇಶದಿಂದ "ಯಾವುದೇ ಅನುಸೂಚಿತ ಪಟ್ಟಿಗೆ ಸೇರದ ಉದ್ದಿಮೆಯ ಕೆಲಸದಲ್ಲಿ ಉದ್ಯೋಗ" ಅನುಸೂಚಿತ ಉದ್ದಿಮೆಗೆ ಕನಿಷ್ಠ ವೇತನ ದರಗಳನ್ನು ನಿಗದಿಪಡಿಸಿದ್ದು, ತನ್ಮೂಲಕ ರಾಜ್ಯಾದ್ಯಂತ ಕಾರ್ಮಿಕರಿಗೆ ಕನಿಷ್ಠ ವೇತನ ದರಗಳನ್ನು ನಿಗದಿಪಡಿಸಲಾಗಿರುತ್ತದೆ.<br><br>ಸದರಿ 81 ಅನುಸೂಚಿತ ಉದ್ದಿಮೆಗಳಿಗೆ 2025-26 ನೇ ಸಾಲಿಗೆ ಅನ್ವಯವಾಗುವ ಕನಿಷ್ಠ-ಗರಿಷ್ಠದರಗಳ ಪಟ್ಟಿಯನ್ನು **ಅನುಬಂಧ-1** ರಲ್ಲಿ ಒದಗಿಸಿದೆ. |
| ಆ) | ಜಾರಿ ಮಾಡಿದ್ದಲ್ಲಿ ಕಾಯ್ದೆಯನ್ವಯ ಉದ್ಯೋಗದಾತರು ಉದ್ಯೋಗಿಗಳಿಗೆ ನೀಡಬೇಕಾಗಿರುವ ಕನಿಷ್ಠ ಮೂಲ ವೇತನ ಎಷ್ಟು; | |
| ಇ) | ಎಲ್ಲಾ ಖಾಸಗಿ/ಸರ್ಕಾರಿ ಅನುದಾನಿತ ಸಂಸ್ಥೆಗಳು ಕನಿಷ್ಠ ವೇತನ ಮೂಲ ವೇತನವನ್ನು ನೀಡುತ್ತಿರುವುದನ್ನು ಸರ್ಕಾರವು ಖಚಿತಪಡಿಸಿಕೊಂಡಿದೆಯೇ; | ಹೌದು. ಎಲ್ಲಾ ಖಾಸಗಿ/ಸರ್ಕಾರಿ ಅನುದಾನಿತ ಸಂಸ್ಥೆಗಳಲ್ಲಿ ಸರ್ಕಾರ ನಿಗಧಿ ಪಡಿಸಿರುವ ಕನಿಷ್ಠ ವೇತನ ನೀಡುತ್ತಿರುವುದನ್ನು ಸರ್ಕಾರವು ಖಚಿತಪಡಿಸಿಕೊಂಡಿದೆ. |
| ಈ) | ಕನಿಷ್ಠ ವೇತನ ನೀಡದಿರುವ ಸರ್ಕಾರಿ / ಖಾಸಗಿ ಸಂಸ್ಥೆಗಳ ಮೇಲೆ ಯಾವ ಕ್ರಮವನ್ನು ಸರ್ಕಾರದಿಂದ ಕೈಗೊಳ್ಳಲಾಗುವುದು? | ಕನಿಷ್ಠ ವೇತನ ನೀಡದಿರುವ ಸರ್ಕಾರಿ/ಖಾಸಗಿ ಸಂಸ್ಥೆಗಳು ಸರ್ಕಾರ ನಿಗಧಿ ಪಡಿಸಿರುವ ಕನಿಷ್ಠ ವೇತನ ಪಾವತಿಸದ ಕುರಿತು ದೂರುಗಳು ಸ್ವೀಕೃತವಾದಲ್ಲಿ ಹಾಗೂ ದೈನಂದಿನ ತಪಾಸಣಾ ಸಂದರ್ಭದಲ್ಲಿ ಕಂಡುಬಂದಲ್ಲಿ ಕನಿಷ್ಠ ವೇತನ ಕಾಯ್ದೆ, 1948ರಡಿ ಅಧಿಸೂಚಿಸಲ್ಪಟ್ಟ ನಿರೀಕ್ಷಕರು ನಿಯಮಾನುಸಾರ ಪರಿಶೀಲಿಸಿ, ತಪಾಸಣೆ ನಡೆಸಿ, ಉಲ್ಲಂಘನೆಗಳು ಕಂಡುಬಂದಲ್ಲಿ ಸದರಿ ಕಾಯ್ದೆಯಡಿ ಅಧಿಸೂಚಿಸಲ್ಪಟ್ಟ ಸಕ್ಷಮ ಪ್ರಾಧಿಕಾರಿಗಳ ಮುಂದೆ ಕ್ಲೇಮ್ ಅರ್ಜಿಗಳನ್ನು ಸಲ್ಲಿಸುತ್ತಿದ್ದು, ಕ್ಲೇಮ್ ಪ್ರಾಧಿಕಾರಿಗಳು ಸೆಕ್ಷನ್ 20(1) ರಡಿ ಸದರಿ ಕ್ಲೇಮ್ ಅರ್ಜಿಗಳನ್ನು ಪರಿಶೀಲಿಸಿ, ವಿಚಾರಣೆ ನಡೆಸಿ, ನಿಯಮಾನುಸಾರ ಆದೇಶ ಹೊರಡಿಸುವ |

| | | |
|---|---|---|
| | | ಮೂಲಕ ವ್ಯತ್ಯಾಸದ ಕನಿಷ್ಠ ವೇತನದ ಜೊತೆಗೆ ಪರಿಹಾರವನ್ನು ಪಾವತಿಸಲು ಸಂಬಂಧಿಸಿದ ಗುತ್ತಿಗೆದಾರರು/ಸಂಸ್ಥೆಗಳಿಗೆ ನಿರ್ದೇಶನಗಳನ್ನು ನೀಡಲಾಗುತ್ತಿದೆ.<br><br>ಈ ಸಂಬಂಧ ಕಾರ್ಯವ್ಯಾಪ್ತಿಯ ಕನಿಷ್ಠ ವೇತನ ಕಾಯ್ದೆ, 1948ರಡಿ ಕನಿಷ್ಠ ಪಾವತಿ ಪ್ರಾಧಿಕಾರಿಗಳ ಮುಂದೆ ಕಳೆದ ಮೂರು ವರ್ಷದ ಅವಧಿಯಲ್ಲಿ ಸರ್ಕಾರಿ ಸಂಸ್ಥೆಗಳಿಗೆ ಸಂಬಂಧಿಸಿದಂತೆ ಒಟ್ಟು 18602 ಕಾರ್ಮಿಕರಿಗೆ ಸಂಬಂಧಿಸಿದಂತೆ ರೂ.197.96 ಕೋಟಿ ಮೊತ್ತದ 3995 ಕ್ಲೇಮ್ ಅರ್ಜಿಗಳನ್ನು ಸಕ್ಷಮ ಪ್ರಾಧಿಕಾರಿಗಳು ಮುಂದೆ ದಾಖಲಿಸಲಾಗಿರುತ್ತದೆ. ಅದರಲ್ಲಿ 2677 ಕ್ಲೇಮ್ ಅರ್ಜಿಗಳನ್ನು ವಿಲೇವಾರಿ ಮಾಡಿ, ರೂ.467.23 ಕೋಟಿ ಮೊತ್ತದ ಪಾವತಿಗಾಗಿ ಆದೇಶ ಹೊರಡಿಸಲಾಗಿದ್ದು, ಒಟ್ಟು ರೂ.641.00 ಕೋಟಿ ಮೊತ್ತದ ಕ್ಲೇಮ್ ಮೊತ್ತವನ್ನು 3546 ಕಾರ್ಮಿಕರಿಗೆ ವಿತರಿಸಿ ಪರಿಹಾರ ದೊರಕಿಸಿಕೊಡಲಾಗಿದೆ. ಉಳಿದ ಕ್ಲೇಮ್ ಅರ್ಜಿಗಳು ವಿಚಾರಣಾ ಹಂತದಲ್ಲಿದ್ದು, ನಿಯಮಾನುಸಾರ ಕ್ರಮಕೈಗೊಳ್ಳಲಾಗುತ್ತಿದೆ. ಮಾಹಿತಿಯನ್ನು **ಅನುಬಂದ-2 ರಲ್ಲಿ** ಒದಗಿಸಿದೆ.<br><br>ಮುಂದುವರೆದು, ಕಳೆದ ಮೂರು ವರ್ಷದ ಅವಧಿಯಲ್ಲಿ ಖಾಸಗಿ ಸಂಸ್ಥೆಗಳಿಗೆ ಸಂಬಂಧಿಸಿದಂತೆ ಒಟ್ಟು 17673 ಕಾರ್ಮಿಕರಿಗೆ ಸಂಬಂಧಿಸಿದಂತೆ ರೂ.913.00 ಕೋಟಿ ಮೊತ್ತದ 4498 ಕ್ಲೇಮ್ ಅರ್ಜಿಗಳನ್ನು ಸಕ್ಷಮ ಪ್ರಾಧಿಕಾರಿಗಳು ಮುಂದೆ ದಾಖಲಿಸಲಾಗಿರುತ್ತದೆ. ಅದರಲ್ಲಿ 3303 ಕ್ಲೇಮ್ ಅರ್ಜಿಗಳನ್ನು ವಿಲೇವಾರಿ ಮಾಡಿ, ರೂ.670.00 ಕೋಟಿ ಮೊತ್ತದ ಪಾವತಿಗಾಗಿ ಆದೇಶ ಹೊರಡಿಸಲಾಗಿದ್ದು, ಒಟ್ಟು ರೂ.599.434 ಕೋಟಿ ಮೊತ್ತದ ಕ್ಲೇಮ್ ಮೊತ್ತವನ್ನು 4577 ಕಾರ್ಮಿಕರಿಗೆ ವಿತರಿಸಿ ಪರಿಹಾರ ದೊರಕಿಸಿಕೊಡಲಾಗಿದೆ. ಉಳಿದ ಕ್ಲೇಮ್ ಅರ್ಜಿಗಳು ವಿಚಾರಣಾ ಹಂತದಲ್ಲಿದ್ದು, ನಿಯಮಾನುಸಾರ ಕ್ರಮಕೈಗೊಳ್ಳಲಾಗುತ್ತಿದೆ. ಮಾಹಿತಿಯನ್ನು **ಅನುಬಂದ-2(ಎ) ರಲ್ಲಿ** ಒದಗಿಸಿದೆ. |

**ಸಂಖ್ಯೆ: ಕಾಇ 619 ಎಲ್ ಡಬ್ಲ್ಯೂಎ 2025**

**(ಸಂತೋಷ್ ಎಸ್. ಲಾಡ್)**
**ಕಾರ್ಮಿಕ ಸಚಿವರು**

ಅನುಬಂಧ -1

| 2025–26ನೇ ಸಾಲಿನ ಅನುಸೂಚಿತ ಉದ್ದಿಮೆಗಳಿಗೆ ಕನಿಷ್ಠ ವೇತನ ನಿಗದಿ ಮತ್ತು ಪರಿಷ್ಕರಣೆ ಕುರಿತ ಕನಿಷ್ಠ ಮತ್ತು ಗರಿಷ್ಠ ವೇತನ ದರಗಳ ವಿವರಣೆ | | | | | |
|---|---|---|---|---|---|
| ಕ್ರ ಸಂ | ಅನುಸೂಚಿತ ಉದ್ದಿಮೆಯ ಹೆಸರು | ಕನಿಷ್ಠ ವೇತನ ದರಗಳು (2025–26) | | | |
| | | ದೈನಿಕ | | ಮಾಸಿಕ | |
| | | ಕನಿಷ್ಠ | ಗರಿಷ್ಠ | ಕನಿಷ್ಠ | ಗರಿಷ್ಠ |
| 1 | ಬೇಸಾಯ ಮತ್ತು ಸಂಬಂಧಿತ ಕೆಲಸಗಳಲ್ಲಿ ಉದ್ಯೋಗ | 533.21 | 533.21 | 13863.56 | 13863.56 |
| 2 | ಲಘು ಪಾನೀಯ ಸೋಡಾ ಸಹಿತ ಎಲ್ಲಾ ಇಂಗಾಲಾಮ್ಲಿತ ಪಾನೀಯ, ಮಿನರಲ್ (ಖನಿಜ) ನೀರು ಮತ್ತು ಜ್ಯೂಸ್ (ಹಣ್ಣಿನ ರಸ) ಉತ್ಪಾದನೆ ಹಾಗೂ ಸಂಬಂಧಪಟ್ಟ ಪ್ರಕ್ರಿಯೆಗಳಲ್ಲಿ ಉದ್ಯೋಗ. | 565.05 | 774.76 | 14691.32 | 20143.79 |
| 3 | ಅಗರಬತ್ತಿ ತಯಾರಿಕೆ ಮತ್ತು ಸಾಂಬ್ರಾಣಿ (ಇನ್‌ಸೆನ್ಸ್) ಉತ್ಪನ್ನಗಳ ತಯಾರಿಕೆಯಲ್ಲಿ ಉದ್ಯೋಗ | 516.20 | 592.35 | 13421.16 | 15401.16 |
| 4 | ಅಡಿಕೆ (ಸುಪಾರಿ) ಉದ್ದಿಮೆಗಳಲ್ಲಿ ಉದ್ಯೋಗ | 543.22 | 603.90 | 14123.60 | 15701.43 |
| 5 | ಸ್ವಯಂಯಾನ ಯಂತ್ರ ಶಾಸ್ತ್ರ (ಆಟೋಮೊಬೈಲ್ ಇಂಜಿನಿಯರಿಂಗ್) (ಉತ್ಪಾದನೆ, ಅಸೆಂಬ್ಲಿಂಗ್, ಬಾಡಿ ಬಿಲ್ಡಿಂಗ್, ಸರ್ವೀಸಿಂಗ್ ಮತ್ತು ರಿಪೇರಿ ಕೆಲಸಗಳ ಸಹಿತ) | 519.39 | 771.42 | 13504.07 | 20056.85 |
| 6 | ಬೇಕರಿ ಉದ್ದಿಮೆ ಮತ್ತು ಬೇಕಿಂಗ್ ಪ್ರಕ್ರಿಯೆಗಳಲ್ಲಿ ಉದ್ಯೋಗ. | 543.22 | 751.42 | 14123.60 | 19537.00 |
| 7 | ಬೀಡಿ ತಯಾರಿಕೆ ಪ್ರಕ್ರಿಯೆಯಲ್ಲಿ ಉದ್ಯೋಗ | 354.03 | 825.29 | 9204.90 | 21457.60 |
| 8 | ತಂಬಾಕು ಸಂಸ್ಕರಣಾ ಉದ್ದಿಮೆಗಳಲ್ಲಿ ಉದ್ಯೋಗ | 543.22 | 751.42 | 14123.60 | 19537.00 |

| | | | | | |
|---|---|---|---|---|---|
| 9 | ಬಿಸ್ಕತ್ ತಯಾರಿಕಾ ಸಂಸ್ಥೆಗಳಲ್ಲಿ ಉದ್ಯೋಗ | 543.22 | 697.50 | 14123.60 | 18134.87 |
| 10 | ಹಿತ್ತಾಳೆ, ತಾಮ್ರ, ಅಲ್ಯೂಮಿನಿಯಂ, ಉಕ್ಕು (ಸ್ಟೀಲ್), ಹಿಂಡಾಲಿಯಮ್ ಪಾತ್ರೆಗಳು ಮತ್ತು ಇತರೆ ಉತ್ಪನ್ನಗಳ ತಯಾರಿಕೆಯಲ್ಲಿ ಉದ್ಯೋಗ | 543.22 | 751.42 | 14123.60 | 19537.00 |
| 11 | ಇಟ್ಟಿಗೆ ತಯಾರಿಕೆ ಹಾಗೂ ಪೂರ್ವ ಒತ್ತಡ (ಪ್ರೀ- ಸ್ಟ್ರೆಸ್‌ಡ್) ದೊಂದಿಗೆ ತಯಾರಿಸಿದ ಉತ್ಪನ್ನಗಳ ತಯಾರಿಕೆಯ ಉದ್ದಿಮೆಗಳಲ್ಲಿ ಉದ್ಯೋಗ | 581.07 | 621.01 | 15107.70 | 16146.22 |
| 12 | ಮರದ ಕೆಲಸ [ಕಾರ್ಪೆಂಟರಿ] ಹಾಗೂ ಮರ ಕೊಯ್ಯುವ [ಸಾಮಿಲ್] ಸಂಸ್ಥೆಗಳಲ್ಲಿ ಉದ್ಯೋಗ | 543.22 | 751.42 | 14123.60 | 19537.00 |
| 13 | ಪ್ಲೈವುಡ್ ತಯಾರಿಕಾ ಸಂಸ್ಥೆಗಳಲ್ಲಿ ಉದ್ಯೋಗ | 543.22 | 751.42 | 14123.60 | 19537.00 |
| 14 | ಮರದ ದಿಮ್ಮಿಗಳ ಘಟಕಗಳಲ್ಲಿ ಉದ್ಯೋಗ. | 519.22 | 712.98 | 13499.78 | 18537.60 |
| 15 | ವಿನೀರ್ ಉದ್ದಿಮೆಗಳಲ್ಲಿ ಉದ್ಯೋಗ | 565.05 | 754.26 | 14691.32 | 19610.86 |
| 16 | ಏಲಕ್ಕಿ ಮಲ್ಲೆಗಳು ಮತ್ತು ಏಲಕ್ಕಿ ತೋಟಗಳಲ್ಲಿ ಉದ್ಯೋಗ | 543.22 | 751.42 | 14123.60 | 19537.00 |
| 17 | ಗೋಡಂಬಿ ಸಂಸ್ಕರಣಾ ಉದ್ದಿಮೆಗಳಲ್ಲಿ ಉದ್ಯೋಗ. | 554.09 | 598.95 | 14406.40 | 15572.70 |
| 18 | ಜೇಡಿ ಮಣ್ಣಿನ ಮಡಿಕೆಗಳು, ಸಿರಾಮಿಕ್ಸ್ ಸ್ಟೋನ್ ವೇರ್ ಮತ್ತು ಇತರೆ ಉತ್ಪನ್ನಗಳ ತಯಾರಿಕಾ ಸಂಸ್ಥೆಗಳಲ್ಲಿ ಉದ್ಯೋಗ | 565.92 | 771.42 | 14713.85 | 20056.85 |
| 19 | ಸಿಂಕೋನಾ, ರಬ್ಬರ್, ಟೀ & ಕಾಫೀ ತೋಟಗಳಲ್ಲಿ ಉದ್ಯೋಗ (ಕಛೇರಿ ಸಿಬ್ಬಂದಿಗಳನ್ನು ಹೊರತುಪಡಿಸಿ) | 476.11 | 495.11 | 12378.80 | 12872.80 |

| | | | | | |
|---|---|---|---|---|---|
| 20 | ಸಿಂಕೋನಾ, ರಬ್ಬರ್, ಟೀ & ಕಾಫೀ ತೋಟಗಳಲ್ಲಿ ಉದ್ಯೋಗ (ಕಛೇರಿ ಸಿಬ್ಬಂದಿಗಳು) | 507.11 | 545.11 | 13184.80 | 14172.80 |
| 21 | ರಾಸಾಯನಿಕ ರಸಗೊಬ್ಬರ, ಕೀಟ ನಾಶಕ, ಕ್ರಿಮಿನಾಶಕ ಉತ್ಪಾದನಾ ಉದ್ದಿಮೆಯ ಕೆಲಸಗಳಲ್ಲಿ ಉದ್ಯೋಗ | 543.22 | 751.42 | 14123.60 | 19537.00 |
| 22 | ಕ್ಲಬ್‌ಗಳಲ್ಲಿ ಉದ್ಯೋಗ | 565.07 | 760.12 | 14691.80 | 19763.12 |
| 23 | ಕಾಫಿ ಕ್ಯೂರಿಂಗ್ ಸಂಸ್ಥೆಗಳಲ್ಲಿ ಉದ್ಯೋಗ. | 543.09 | 647.36 | 14120.40 | 15043.40 |
| 24 | ಮಿಠಾಯಿ ತಯಾರಿಸುವ (ಕನ್‌ಫೆಕ್ಷನರಿ) ಉದ್ದಿಮೆಗಳಲ್ಲಿ ಉದ್ಯೋಗ. | 543.22 | 697.50 | 14123.60 | 18134.87 |
| 25 | ಹತ್ತಿ ಹೆಕ್ಕುವ, ಅಮುಕುವ ಮತ್ತು ಸಂಬಂಧಪಟ್ಟ ಪ್ರಕ್ರಿಯೆಗಳ ಕೆಲಸಗಳಲ್ಲಿ ಉದ್ಯೋಗ. | 526.10 | 583.66 | 13678.68 | 15175.20 |
| 26 | ಕಟ್ಟಡ ಮತ್ತು ಇತರೆ ನಿರ್ಮಾಣ ಕಾಮಗಾರಿಗಳಲ್ಲಿ ಉದ್ಯೋಗ | 538.64 | 739.09 | 14004.68 | 19216.37 |
| 27 | ಗೃಹಕೃತ್ಯ ಸಹಾಯಕರು, ಮಕ್ಕಳ ಪೋಷಣಾ ಸಹಾಯಕರು, ಹೋಮ್ ನರ್ಸ್‌ಗಳ ಸಹಿತ ವಾಸದ ಮನೆಗಳಲ್ಲಿ ಗೃಹ ಕೆಲಸಗಳ ಉದ್ಯೋಗ | 538.81 | 773.57 | 14008.97 | 20112.75 |
| 28 | ಎಲೆಕ್ಟ್ರಾನಿಕ್ಸ್ ಉದ್ದಿಮೆಗಳಲ್ಲಿ ಉದ್ಯೋಗ | 565.05 | 796.72 | 14691.32 | 20714.79 |
| 29 | ಎಲೆಕ್ಟ್ರಾನಿಕ್ಸ್ ಮತ್ತು ಎಲೆಕ್ಟ್ರೋಪ್ಲೇಟಿಂಗ್ ಉದ್ದಿಮೆಗಳಲ್ಲಿ ಉದ್ಯೋಗ. | 565.05 | 774.76 | 14691.32 | 20143.79 |
| 30 | ಅನುಸೂಚಿತ ಪಟ್ಟಿಗೆ ಸೇರದ ಉದ್ದಿಮೆಯ ಕೆಲಸದಲ್ಲಿ ಉದ್ಯೋಗ. | 543.22 | 751.42 | 14123.60 | 19537.00 |

| | | | | | |
|---|---|---|---|---|---|
| 31 | ಇಂಜಿನಿಯರಿಂಗ್, ಫ್ಯಾಬ್ರಿಕೇಷನ್ ಹಾಗೂ ಸಂಬಂಧಪಟ್ಟ ಉದ್ದಿಮೆಯ ಕೆಲಸಗಳಲ್ಲಿ ಉದ್ಯೋಗ | 543.22 | 751.42 | 14123.60 | 19537.00 |
| 32 | ಚಲನಚಿತ್ರ (ಸಿನಿಮಾ / ಕಿರು ಚಿತ್ರ) ಉದ್ದಿಮೆಗಳ ನಿರ್ಮಾಣ, ವಿತರಣೆ, ಜಾಹಿರಾತು ಹಾಗೂ ಸಂಬಂಧಪಟ್ಟ ಕೆಲಸಗಳಲ್ಲಿ ಉದ್ಯೋಗ | 519.22 | 732.95 | 13499.78 | 19056.65 |
| 33 | ಮೀನು ಹಿಡಿಯುವುದು, ಮೀನು ಸಂಸ್ಕರಣೆ, ಮೀನು ಪೀಲಿಂಗ್, ಸೀಗಡಿ / ಏಡಿ ಸಂಸ್ಕರಣೆ ಹಾಗೂ ಕಪ್ಪೆ ಕಾಲು ರಫ್ತು ಮಾಡುವ ಉದ್ದಿಮೆಗಳಲ್ಲಿ ಉದ್ಯೋಗ | 683.72 | 778.92 | 17776.80 | 20251.80 |
| 34 | ಆಹಾರ ಸಂಸ್ಕರಣೆ ಮತ್ತು ಆಹಾರ ಪದಾರ್ಥಗಳ ಪ್ಯಾಕಿಂಗ್ (ಸಿದ್ಧ ತಿನಿಸುಗಳು, ಸಿದ್ಧ ಪಾನೀಯ ಹಾಗೂ ಮಸಾಲೆ ಸಹಿತ) ಪ್ರಕ್ರಿಯೆಗಳಲ್ಲಿ ಉದ್ಯೋಗ | 565.05 | 774.76 | 14691.32 | 20143.79 |
| 35 | ಅರಣ್ಯ ಮತ್ತು ಕಟ್ಟಿಗೆ ಡಿಪೋ (ಫಾರೆಸ್ಟ್ರಿ ಮತ್ತು ಟಿಂಬರಿಂಗ್) ಉದ್ದಿಮೆಗಳಲ್ಲಿ ಉದ್ಯೋಗ | 603.90 | 697.50 | 15701.43 | 18134.87 |
| 36 | ಫೌಂಡ್ರಿ (ಯಂತ್ರಗಳ ಸಹಿತ ಅಥವಾ ರಹಿತ ಮೆಷಿನ್ ಶಾಫ್) ಗಳಲ್ಲಿ ಉದ್ಯೋಗ | 519.39 | 771.42 | 13504.07 | 20056.85 |
| 37 | ಗಾಜು ಮತ್ತು ಗಾಜಿನ ಉತ್ಪನ್ನಗಳ ಸಂಸ್ಥೆಗಳಲ್ಲಿ ಉದ್ಯೋಗ | 524.17 | 726.29 | 13628.48 | 18883.62 |
| 38 | ಗ್ರಾನೈಟ್ ಕಲ್ಲುಗಳು ಹಾಗೂ ಮಾರ್ಬಲ್ ಉದ್ದಿಮೆಗಳಲ್ಲಿ ಉದ್ಯೋಗ | 543.22 | 751.42 | 14123.60 | 19537.00 |
| 39 | ಕೈಮಗ್ಗ ಮತ್ತು ವಿದ್ಯುತ್‌ಚಾಲಿತ ಮಗ್ಗ [ಹತ್ತಿ] ಉದ್ದಿಮೆಗಳಲ್ಲಿ ಉದ್ಯೋಗ. | 501.78 | 565.25 | 13046.40 | 14696.40 |

| | | | | | |
|---|---|---|---|---|---|
| 40 | ಆಸ್ಪತ್ರೆಗಳು, ಪ್ರಸವಾಲಯಗಳು (ಮೆಟರ್ನಿಟಿ ಹೋಂಗಳು), ಶುಶ್ರೂಷಾಲಯ (ನರ್ಸಿಂಗ್ ಹೋಂಗಳು) ಕ್ಲಿನಿಕ್, ಹಾಗೂ ವ್ಯಸನ ಮುಕ್ತ ಕೇಂದ್ರಗಳಲ್ಲಿ ಉದ್ಯೋಗ | 598.18 | 811.13 | 15552.56 | 21089.30 |
| 41 | ವಸತಿ ನಿಲಯಗಳು (ಹಾಸ್ಟೆಲ್‌ಗಳು), ಅತಿಥಿ ಗೃಹಗಳು, ಹೋಮ್ ಸ್ಟೇಗಳು, ಪೇಯಿಂಗ್ ಗೆಸ್ಟ್ ಸಂಸ್ಥೆಗಳು, ಸರ್ವೀಸ್ಡ್ ಅಪಾರ್ಟ್‌ಮೆಂಟ್‌ಗಳು, ರೆಸಿಡೆಂಟ್ಸ್ ಅಸೋಸಿಯೇಷನ್, ಮದುವೆ ಹಾಗೂ ಸಮುದಾಯ ಭವನಗಳಲ್ಲಿ ಉದ್ಯೋಗ | 565.05 | 785.01 | 14691.32 | 20410.25 |
| 42 | ಹೋಟೆಲ್ / ವಸತಿ ಸಹಿತ ಹೋಟೆಲ್‌ಗಳು, ರೆಸ್ಟೋರೆಂಟ್ ಮೋಟೆಲ್‌ಗಳು, ಲಾಡ್ಜ್‌ಗಳು, ಡಾಬಾಗಳು, ಕ್ಯಾಂಟೀನ್, ಹೊರಾಂಗಣ ಆಹಾರ ತಯಾರಿಕೆ ಹಾಗೂ ಸರಬರಾಜು (ಕೇಟರಿಂಗ್) ಮತ್ತು ಸಂಬಂಧಪಟ್ಟ ಸಂಸ್ಥೆಗಳಲ್ಲಿ ಉದ್ಯೋಗ | 519.22 | 752.91 | 13499.78 | 19575.74 |
| 43 | ಮಂಜುಗಡ್ಡೆ ಕಾರ್ಖಾನೆ (ಐಸ್ ಫ್ಯಾಕ್ಟರಿ) ಐಸ್ ಕ್ರೀಮ್ ಹಾಗೂ ಶೀತಲ ಸಂರಕ್ಷಣಾ ಸಂಸ್ಥೆಗಳಲ್ಲಿ ಉದ್ಯೋಗ. | 565.05 | 785.01 | 14691.32 | 20410.25 |
| 44 | ಖಂಡಸಾರಿ ಸಕ್ಕರೆ ಕಾರ್ಖಾನೆಗಳಲ್ಲಿ ಉದ್ಯೋಗ | 543.22 | 751.42 | 14123.60 | 19537.00 |
| 45 | ಬಟ್ಟೆ ಒಗೆಯುವ, ಡ್ರೈಕ್ಲೀನ್ ಮತ್ತು ಲಾಂಡ್ರಿ ಉದ್ದಿಮೆಗಳ ಕೆಲಸಗಳಲ್ಲಿ ಉದ್ಯೋಗ | 519.22 | 739.60 | 13499.78 | 19229.68 |

| | | | | | |
|---|---|---|---|---|---|
| 46 | ಮದ್ಯ ತಯಾರಿಕಾ (ಡಿಸ್ಟಿಲರೀಸ್ ಹಾಗೂ ಬ್ರಿವರೀಸ್), ಬಾಟಲಿಂಗ್ ಹಾಗೂ ಪ್ಯಾಕಿಂಗ್ ಸಹಿತ ಉದ್ದಿಮೆಗಳ ಕೆಲಸಗಳಲ್ಲಿ ಉದ್ಯೋಗ | 565.05 | 774.76 | 14691.32 | 20143.79 |
| 47 | ಆಯುರ್ವೇದ, ಯೋಗ, ಯುನಾನಿ, ಸಿದ್ಧ ಹೋಮಿಯೋಪತಿ (ಆಯುಷ್) ಹಾಗೂ ಅಲೋಪಥಿಕ್ ಔಷಧಿಗಳ ತಯಾರಿಕೆಯಲ್ಲಿ ಉದ್ಯೋಗ. (ಉತ್ಪಾದನೆ, ವಿತರಣೆ ಜಾಹಿರಾತು ವಿಭಾಗಗಳ ಸಹಿತ) | 519.22 | 746.26 | 13499.78 | 19402.71 |
| 48 | ಅಕ್ಕಿ, ಭತ್ತ, ಜೋಳ ಅಥವಾ ಇನ್ನಿತರ ಧಾನ್ಯಗಳಿಂದ ಮಂಡಕ್ಕಿ, ಅವಲಕ್ಕಿ, ಚುರುಮುರಾ, ಮುರುಮುರಾ ಹಾಗೂ ಇತರೆ ಉತ್ಪನ್ನಗಳನ್ನು ತಯಾರಿಸುವ ಉದ್ದಿಮಗಳ ಕೆಲಸದಲ್ಲಿ ಉದ್ಯೋಗ | 543.22 | 697.50 | 14123.60 | 18134.87 |
| 49 | ಮೆಟಲ್ ರೋಲಿಂಗ್ ಅಂಡ್ ರೀರೋಲಿಂಗ್– [ಫೆರಸ್] ಉದ್ದಿಮೆಗಳಲ್ಲಿ ಉದ್ಯೋಗ | 543.22 | 751.42 | 14123.60 | 19537.00 |
| 50 | ಮೆಟಲ್ ರೋಲಿಂಗ್ ಅಂಡ್ ರೀರೋಲಿಂಗ್ ಉದ್ದಿಮೆಗಳಲ್ಲಿ ಉದ್ಯೋಗ. [ನಾನ್–ಫೆರಸ್] | 543.22 | 751.42 | 14123.60 | 19537.00 |
| 51 | ಲಘು ಸಿಮೆಂಟ್ ಸ್ಥಾವರಗಳಲ್ಲಿ ಉದ್ಯೋಗ. | 565.05 | 767.42 | 14691.32 | 19952.80 |
| 52 | ಮೊಸಾಯಿಕ್ ಹಂಚುಗಳು, ಎಲ್ಲಾ ರೀತಿಯ ನೆಲ ಹಾಸು ಹಂಚುಗಳು, ಹೊಳಪಿನ ಹಂಚುಗಳ ಉತ್ಪಾದನಾ ಉದ್ದಿಮೆಗಳಲ್ಲಿ ಉದ್ಯೋಗ | 543.22 | 751.42 | 14123.60 | 19537.00 |
| 53 | ಎಣ್ಣೆ ಮಿಲ್‌ಗಳಲ್ಲಿ ಉದ್ಯೋಗ. | 565.05 | 764.51 | 14691.30 | 19877.32 |
| 54 | ಪೆಟ್ರೋಲ್, ಡೀಸೆಲ್ ಆಯಿಲ್ ಮತ್ತು ಎಲ್.ಪಿ.ಜಿ. ಪಂಪ್‌ಗಳಲ್ಲಿ ಉದ್ಯೋಗ | 543.22 | 751.42 | 14123.60 | 19537.00 |

| | | | | | |
|---|---|---|---|---|---|
| 55 | ಪ್ಲಾಸ್ಟಿಕ್, ಪಾಲಿ ಪ್ಲಾಸ್ಟಿಕ್, ರಬ್ಬರ್, ಪಿವಿಸಿ ಪೈಪ್ಸ್ ಉತ್ಪಾದನಾ ಉದ್ದಿಮೆಗಳಲ್ಲಿ ಉದ್ಯೋಗ | 566.70 | 775.09 | 14734.16 | 20152.28 |
| 56 | ಮುದ್ರಣ ಹಾಗೂ ಪ್ರಸರಣಾ ಉದ್ದಿಮೆಗಳಲ್ಲಿ ಉದ್ಯೋಗ | 565.05 | 777.69 | 14691.32 | 20219.92 |
| 57 | ಖಾಸಗಿ ವಿತ್ತ ನಿಗಮಗಳು, (ಫೈನಾನ್ಸ್ ಕಾರ್ಪೋರೇಷನ್) ಚಿಟ್ ಫಂಡ್‌ಗಳು ಹಾಗೂ ಕಾನೂನು ಬದ್ಧ ಬ್ಯಾಂಕಿಂಗ್ ರಹಿತ ನಗದು ವಹಿವಾಟು ಸಂಸ್ಥೆಗಳಲ್ಲಿ ಉದ್ಯೋಗ | 566.70 | 775.09 | 14734.16 | 20152.28 |
| 58 | ಶೌಚಾಲಯಗಳು, ಸ್ನಾನಗೃಹಗಳು, ಒಳಚರಂಡಿಗಳನ್ನು ಶುಚಿ ಮಾಡುವ (Scavenging) ಕೆಲಸಗಳಲ್ಲಿ ಉದ್ಯೋಗ. (ನಗರ ಸ್ಥಳೀಯ ಸಂಸ್ಥೆಗಳು ಹಾಗೂ ಪಂಚಾಯತ್ ರಾಜ್ ಸಂಸ್ಥೆಗಳನ್ನು ಹೊರತುಪಡಿಸಿ) | 740.63 | 840.28 | 19256.32 | 21847.30 |
| 59 | ಹಾಲು ಶೇಖರಣೆ, ಸಂಸ್ಕರಣೆ ಹಾಗೂ ವಿತರಣಾ ಪ್ರಕ್ರಿಯೆಯ ಉದ್ದಿಮೆಗಳಲ್ಲಿ ಉದ್ಯೋಗ | 565.05 | 774.76 | 14691.32 | 20143.79 |
| 60 | ಸಾರ್ವಜನಿಕ ಸಾರಿಗೆ ಸಂಸ್ಥೆಗಳ ಉದ್ದಿಮೆಗಳಲ್ಲಿ ಉದ್ಯೋಗ | 523.54 | 623.54 | 13612.00 | 16212.00 |
| 61 | ಕಾಗದ, ಪಲ್ಪ್ ಕಾಗದ, ರಟ್ಟಿನ ಹಲಗೆ (ಕಾರ್ಡ್‌ಬೋರ್ಡ್), ಹುಲ್ಲಿನ ಹಲಗೆ (ಸ್ಟ್ರಾ ಬೋರ್ಡ್) ಮತ್ತು ನ್ಯೂಸ್ ಪ್ರಿಂಟ್ ಉದ್ದಿಮೆಗಳಲ್ಲಿ ಉದ್ಯೋಗ | 543.22 | 751.42 | 14123.60 | 19537.00 |
| 62 | ಅಕ್ಕಿ, ಧಾನ್ಯಗಳು ಮತ್ತು ಬೇಳೆ ಗಿರಣಿ ಉದ್ದಿಮೆಗಳಲ್ಲಿ ಉದ್ಯೋಗ | 543.22 | 751.42 | 14123.60 | 19537.00 |
| 63 | ರಬ್ಬರ್ ಉತ್ಪನ್ನಗಳು (ಪೋಮ್ ಮತ್ತು ಕಾಯರ್ ರಬ್ಬರ್ ಸಹಿತ) ಉದ್ದಿಮೆಗಳಲ್ಲಿ ಉದ್ಯೋಗ | 543.22 | 751.42 | 14123.60 | 19537.00 |

| | | | | | |
|---|---|---|---|---|---|
| 64 | ಔಷಧಿಗಳು, ಗೃಹಪಯೋಗಿ ವಸ್ತುಗಳ ವೃತ್ತಿಪರ ಪ್ರವರ್ತಕ ಮತ್ತು ಮಾರಾಟದಲ್ಲಿ ಉದ್ಯೋಗ | 519.22 | 739.60 | 13499.78 | 19229.68 |
| 65 | ಭದ್ರತಾ ಏಜೆನ್ಸಿಗಳಲ್ಲಿ ಉದ್ಯೋಗ. (ಕಛೇರಿ ಸಿಬ್ಬಂದಿ ಹಾಗೂ ಭದ್ರತಾ ಸಿಬ್ಬಂದಿಗಳನ್ನು ಏಜೆನ್ಸಿಯ ಮೂಲಕ ನಿಯೋಜಿಸಿಕೊಳ್ಳುವ ಎಲ್ಲಾ ಸಂಸ್ಥೆಗಳು ಹಾಗೂ ಉದ್ದಿಮೆಗಳ ಸಹಿತ). | 601.72 | 777.09 | 15644.76 | 20204.43 |
| 66 | ರೇಷ್ಮೆ ಘಟಕಗಳಲ್ಲಿ ಮತ್ತು ಪ್ರಕ್ರಿಯೆಗಳಲ್ಲಿ ಉದ್ಯೋಗ ಭಾಗ–1 | 543.22 | 697.50 | 14123.60 | 18134.87 |
| 67 | ರೇಷ್ಮೆ ಘಟಕಗಳಲ್ಲಿ ಮತ್ತು ಪ್ರಕ್ರಿಯೆಗಳಲ್ಲಿ ಉದ್ಯೋಗ ಭಾಗ–2 | 624.07 | 751.42 | 16225.70 | 19537.00 |
| 68 | ಅಂಗಡಿ ಮತ್ತು ವಾಣಿಜ್ಯ ಸಂಸ್ಥೆಗಳಲ್ಲಿ ಉದ್ಯೋಗ | 543.22 | 751.42 | 14123.60 | 19537.00 |
| 69 | ಸ್ಪಿನ್ನಿಂಗ್ ಮಿಲ್ ಉದ್ದಿಮೆಗಳಲ್ಲಿ ಉದ್ಯೋಗ | 493.42 | 530.52 | 12829.02 | 13793.43 |
| 70 | ಸ್ಪನ್ ಪೈಪುಗಳು, ಕಾಂಕ್ರೀಟ್ ಪೈಪುಗಳು, ಸಾನಿಟರಿ ಫಿಟ್ಟಿಂಗ್‌ಗಳು, ಪ್ಲೈನ್ ಸಿಮೆಂಟ್ ಕಾಂಕ್ರೀಟ್ (ಪಿ.ಸಿ.ಸಿ.) ಹಾಗೂ ರೀ–ಇನ್‌ಪೋರ್ಸ್‌ಡ್ ಸಿಮೆಂಟ್ ಕಾಂಕ್ರೀಟ್ (ಆರ್.ಸಿ.ಸಿ). ಪೈಪುಗಳು ಮತ್ತು ಕಂಬಗಳ ಉತ್ಪಾದನಾ ಉದ್ದಿಮೆಗಳಲ್ಲಿ ಉದ್ಯೋಗ | 519.22 | 752.91 | 13499.78 | 19575.74 |
| 71 | ಲೋಹದ ಅಲ್ಮೇರಾಗಳು, ಕುರ್ಚಿಗಳು, ಮೇಜುಗಳು ಹಾಗೂ ಇತರೆ ಪೀಠೋಪಕರಣಗಳನ್ನು ಉತ್ಪಾದಿಸುವ ಉದ್ದಿಮೆಗಳಲ್ಲಿ ಉದ್ಯೋಗ | 519.22 | 752.91 | 13499.78 | 19575.74 |
| 72 | ಕಲ್ಲು ಒಡೆಯುವುದು ಮತ್ತು ಕಲ್ಲು ಪುಡಿ ಮಾಡುವ ಉದ್ದಿಮೆಗಳಲ್ಲಿ ಉದ್ಯೋಗ | 543.22 | 697.50 | 14123.60 | 18134.87 |

| | | | | | |
|---|---|---|---|---|---|
| 73 | ಬಟ್ಟೆಗಳ ತಯಾರಿಕೆ (ಗಾರ್ಮೆಂಟ್ಸ್), ವಸ್ತ್ರ ವಿನ್ಯಾಸ (ಕಾಸ್ಟ್ಯೂಮ್ಸ್) ಮತ್ತು ಟೈಲರಿಂಗ್ ಉದ್ದಿಮೆಗಳಲ್ಲಿ ಉದ್ಯೋಗ | 481.57 | 526.41 | 12520.74 | 13686.78 |
| 74 | ರೇಷ್ಮೆ ಬಟ್ಟೆಗಳ (ಸಿಲ್ಕ್) ಉದ್ದಿಮೆಗಳಲ್ಲಿ ಉದ್ಯೋಗ | 560.73 | 590.37 | 14579.02 | 15349.69 |
| 75 | ಹೆಂಚು ತಯಾರಿಕೆ ಉದ್ದಿಮೆಗಳಲ್ಲಿ ಉದ್ಯೋಗ | 543.22 | 697.50 | 14123.60 | 18134.87 |
| 76 | ಶೇಂದಿ ಇಳಿಸುವ ಉದ್ದಿಮೆಗಳಲ್ಲಿ ಉದ್ಯೋಗ | 543.22 | 697.50 | 14123.60 | 18134.87 |
| 77 | ನಗರ ಸ್ಥಳೀಯ ಸಂಸ್ಥೆಗಳು ಹಾಗೂ ಪಂಚಾಯತ್ ರಾಜ್ ಸಂಸ್ಥೆಗಳಲ್ಲಿ ಉದ್ಯೋಗ | 603.55 | 799.01 | 15692.32 | 20774.32 |
| 78 | ಸಹಕಾರ ಸೊಸೈಟಿಗಳಲ್ಲಿ ಉದ್ಯೋಗ | 624.07 | 751.42 | 16225.70 | 19537.00 |
| 79 | ಚಿನ್ನ ಮತ್ತು ಬೆಳ್ಳಿ ಆಭರಣಗಳ ತಯಾರಿಕೆ ಮತ್ತು ಹರಳುಗಳು, ವಜ್ರಗಳನ್ನು ಕತ್ತರಿಸುವುದು, ಹೊಳಪು ಗೊಳಿಸುವ ಉದ್ದಿಮೆಗಳಲ್ಲಿ ಉದ್ಯೋಗ | 581.72 | 751.42 | 15124.60 | 19537.00 |
| 80 | ಬಟ್ಟೆಗಳಿಗೆ ಬಣ್ಣ ಹಾಕುವ (ಡೈ) ಮತ್ತು ಅಚ್ಚು ಹಾಕುವ (ಪ್ರಿಂಟ್) ಹಾಕುವ ಉದ್ದಿಮೆಗಳಲ್ಲಿ ಉದ್ಯೋಗ | 512.71 | 581.20 | 13330.53 | 15111.26 |
| 81 | ಸರಕು ಸಾಮಗ್ರಿಗಳ ಹೇರುವ ಮತ್ತು ಇಳಿಸುವ (ಲೋಡಿಂಗ್ ಮತ್ತು ಅನ್‌ಲೋಡಿಂಗ್) ಕೆಲಸಗಳಲ್ಲಿ ಉದ್ಯೋಗ | ತುಂಡು ಆಧಾರ | | | |